ಆ) ಹೌದು.

ಇ) ಪರಿಶೀಲಿಸಲಾಗುವುದು.

ವಿಷಯ: ಬಸವಕಲ್ಯಾಣದಲ್ಲಿ ಬಾಬಾ ಸಹೇಬ ವಾರದ್‌ರವರ ಪ್ರತಿಮೆ ಸ್ಥಾಪನೆ.

1026 (1535)

ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ): ಮಾನ್ಯ ಪೌರಾಡಳಿತ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣದಲ್ಲಿ ಬಾಬಾ ಸಾಹೇಬ ವಾರದ್‌ರವರ ಕಂಚಿನ ಪ್ರತಿಮೆ ಸ್ಥಾಪಿಸಲು ಸರ್ಕಾರದವರು 10 ಲಕ್ಷ ರೂ.ಗಳನ್ನು ಮಂಜೂರು ಮಾಡುವುದಾಗಿ ಆಶ್ವಾಸನೆ ನೀಡಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಮೇಲ್ಕಂಡ ಪ್ರತಿಮೆಯ ಸ್ಥಾಪನೆಗಾಗಿ ಸರ್ಕಾರ ಪ್ರಸಕ್ತ ಸಾಲಿನಲ್ಲಿ ಇದರಿ ಹಣವನ್ನು ಮಂಜೂರು ಮಾಡುವುದೇ?

ಶ್ರೀ ಮೀರಾಜುದ್ದೀನ ಪಟೇಲ್ (ಪೌರಾಡಳಿತ ರಾಜ್ಯ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ: ಬಸವಕಲ್ಯಾಣದಲ್ಲಿ ಮಿನಿ ವಿಧಾನಸೌಧ ಸ್ಥಾಪನೆ

1027 (1533)

ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1998-99ನೇ ಸಾಲಿನಲ್ಲಿ ಬಸವ ಕಲ್ಯಾಣ ಮಿನಿ ವಿಧಾನಸೌಧ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಬಿ.ಸೋಮಶೇಖರ್ (ಕಂದಾಯ ಸಚಿವರು):

ಅ) ಇಲ್ಲ.

ವಿಷಯ: ನೂತನ ಜಿಲ್ಲೆಯಾದ ಹಾವೇರಿಯಲ್ಲಿ ಕುಡಿಯುವ ನೀರಿನ ಸಮಸ್ಯೆ.